ಕನ್ನಡಪ್ರಭ
ಬುಧವಾರ 6.05.2026

ಗರಿಷ್ಠ 37°c | ಕನಿಷ್ಠ 24°c

ಯಡಿಯೂರಪ್ಪ ಜನಸೇವೆ 50 ವರ್ಷ ಅಭಿಮಾನೋತ್ಸವ ಪೂರ್ವಭಾವಿ ಸಭೆ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಮಾಜಿಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಜನಸೇವೆಯ 50 ವರ್ಷಗಳು ಪೂರ್ಣಗೊಂಡ ಪ್ರಯುಕ್ತ ಅಭಿಮಾನೋತ್ಸವ ಕಾರ್ಯಕ್ರಮದ ಸಿದ್ಧತೆ ಕುರಿತು ಪೂರ್ವಭಾವಿ ಸಭೆ ಪಟ್ಟಣದ ಸಾವಿತ್ರಮ್ಮ ಉದಾಸಿ ಕಲ್ಯಾಣ ಮಂಟಪದಲ್ಲಿ ಜರುಗಿತು.

ಬಿಜೆಪಿ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಮಾತನಾಡಿದ ಮಾಜಿ ಸಚಿವ ಬಿ.ಸಿ. ಪಾಟೀಲ, ಭಾರತೀಯ ಜನತಾ ಪಕ್ಷದ ಸಂಘಟನೆಗಾಗಿ ತಮ್ಮ ಇಡೀ ಜೀವನವನ್ನು ಮುಡುಪಾಗಿಟ್ಟಿರುವ ಬಿ.ಎಸ್. ಯಡಿಯೂರಪ್ಪನವರು ರಾಜಕೀಯ ಕ್ಷೇತ್ರಕ್ಕೆ ಕಾಲಿಟ್ಟು 50 ವರ್ಷಗಳು ಸಂದಿರುವ ಈ ಸಂದರ್ಭದಲ್ಲಿ ಅವರನ್ನು ಅಭಿಮಾನಿಗಳು ಹಾಗೂ ಬಿಜೆಪಿ ಪಕ್ಷದ ಕಾರ್ಯಕರ್ತರು ಅಭಿನಂದಿಸುವ ಕಾರ್ಯಕ್ರಮವನ್ನು ಚಿತ್ರದುರ್ಗದಲ್ಲಿ ಆಯೋಜಿಸಲಾಗಿದೆ. ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರದಲ್ಲಿ ಜನತೆಗೆ ಬಿಎಸ್‌ವೈ ಅವರ ಕೊಡುಗೆಗಳು ಮತ್ತು ರೈತಪರವಾದ ಹೋರಾಟಗಳು, ಪಕ್ಷ ಸಂಘಟನೆ ಇಂಥ ಹಲವು ಕಾರ್ಯಗಳನ್ನು ನೆನಪಿಸುವ ಅಭೂತಪೂರ್ವ ಕಾರ್ಯಕ್ರಮ ಇದಾಗಲಿದೆ. ಅವರು ದಾಪುಗಾಲುಗಳನ್ನು ಸ್ಮರಿಸುವ ಅವಕಾಶ ನಮ್ಮೆಲ್ಲರಿಗೂ ಒದಗಿಬಂದಿದೆ. ಇಂಥಕ್ಷಣಗಳನ್ನು ರಾಜ್ಯದ ಜನತೆ ಕಣ್ತುಂಬಿಕೊಳ್ಳಬೇಕಿದೆ. ಅದಕ್ಕಾಗಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಅಭಿಮಾನಿಗಳು ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು. ಅಧ್ಯಕ್ಷತೆವಹಿಸಿದ್ದ ಭಾರತೀಯ ಜನತಾ ಪಕ್ಷದ ಹಾನಗಲ್ಲ ಮಂಡಲದ ಅಧ್ಯಕ್ಷ ಮಹೇಶಕಮಡೊಳ್ಳಿ ಮಾತನಾಡಿ, ತಾಲೂಕಿನಿಂದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 25 ಬಸ್‌ಗಳನ್ನು ಹಾಗೂ 100 ಕಾರುಗಳನ್ನು ಬಿಎಸ್‌ವೈ ಅಭಿಮಾನೋತ್ಸವಕ್ಕೆ ತೆರಳಲು ಕಾರ್ಯಕರ್ತರಿಗೆ ವ್ಯವಸ್ಥೆಗೊಳ್ಳಲಾಗುತ್ತಿದೆ. ಅಭಿಮಾನೋತ್ಸವದ ಯಶಸ್ಸಿಗಾಗಿ ಎಲ್ಲರೂ ಕೈ ಜೋಡಿಸೋಣ ಎಂದು ಕರೆ ನೀಡಿದರು.

ಸಭೆಯಲ್ಲಿ ಮಾಜಿ ಶಾಸಕ ಶಿವರಾಜ ಸಜ್ಜನರ, ವಿಭಾಗ ಸಹ ಪ್ರಭಾರಿ ಭೋಜರಾಜ ಕರೂದಿ, ಮುಖಂಡರಾದ ಭರತ್ ಬೊಮ್ಮಾಯಿ ಮತ್ತು ಪಕ್ಷದ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮದ ಸಿದ್ಧತೆ ಕುರಿತು ಹಾನಗಲ್ಲಿನಲ್ಲಿ ನಡೆದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾಜಿ ಸಚಿವ ಬಿ.ಸಿ.ಪಾಟೀಲ ಮಾತನಾಡಿದರು.

ಲೇಖನ ಸ್ಪರ್ಧೆಯಲ್ಲಿ ಹಾಲೇಶ ನಾಯಕ ಪ್ರಥಮ

• **ಕನ್ನಡಪ್ರಭ ವಾರ್ತೆ** ಹಿರೇಕೆರೂರು



ಧಾರವಾಡದ ಗಣಕರಂಗ ಸಂಸ್ಥೆ ಹಾಗೂ ತುಮಕೂರಿನ ವಚನ ಮಂದಾರ ಫೌಂಡೇಶನ್ ಬಸವ ಜಯಂತಿ ಅಂಗವಾಗಿ ಆಯೋಜಿಸಿದ್ದ ಬಸವಾದಿ ಶರಣರು ಮುಕ್ತ ಲೇಖನ ಸ್ಪರ್ಧೆಯಲ್ಲಿ ಪಟ್ಟಣದ ಹಿರಿಯ ಪಶುವೈದ್ಯಕೀಯ ಪರೀಕ್ಷಕರಾದ ಹಾಲೇಶ ಆರ್. ನಾಯಕ ಹಾಗೂ ಧಾರವಾಡದ ಸುನಿತಾ ಮೂರಶಿಳ್ಳಿ ಜಂಟಿಯಾಗಿ ಪ್ರಥಮ ಸ್ಥಾನ ಪಡೆದಿದ್ದಾರೆ. ಹಾಲೇಶ ಆರ್.ನಾಯಕ ಅವರು ಬರೆದ ''''ಮಹಾದಾನಿ, ನಿಜಶರಣ ಅಂಬಿಗರ ಚೌಡಯ್ಯ'''' ಲೇಖನ ಹಾಗೂ ಸುನಿತಾ ಮೂರಶಿಳ್ಳಿ ಬರೆದ ''''ಗಣಾಚಾರಿ ಶರಣ ಕಿನ್ನರಿ ಬ್ರಹ್ಮಯ್ಯ'''' ಲೇಖನ ಪ್ರಥಮ ಸ್ಥಾನಕ್ಕೆ ಆಯ್ಕೆಯಾಗಿವೆ. ತುಮಕೂರಿನ ವಚನ ಮಂದಾರ ಫೌಂಡೇಶನ್ ಅಧ್ಯಕ್ಷ ಡಾ. ವಿಜಯಕುಮಾರ ಕಮ್ಮಾರ ಅವರು ಸ್ಪರ್ಧೆಯ ತೀರ್ಪುಗಾರರಾಗಿದ್ದರು ಎಂದು ಗಣಕರಂಗ ಸಂಸ್ಥೆಯ ಮುಖ್ಯಸ್ಥ ಸಿದ್ದರಾಮ ಹಿಪ್ಪರಗಿ ತಿಳಿಸಿದ್ದಾರೆ.

ಸುದ್ದಿ ಸಿಂಚನ

ಆಕ್ಷೇಪಣೆ ಸಲ್ಲಿಸಲು ಅವಧಿ ವಿಸ್ತರಣೆ

ಹಾವೇರಿ: ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯ ಸ್ಥಾನಗಳನ್ನು ಪ್ರಕರಣ 5(1) ರಂತೆ ನಿಗದಿಪಡಿಸಿರುವ ಕರಡು ಪ್ರಕಟಣೆಗೆ ಸಾರ್ವಜನಿಕರಿಂದ ಆಕ್ಷೇಪಣೆಯನ್ನು ಸಲ್ಲಿಸುವ ಅವಧಿಯನ್ನು ಮೇ 8ರ ಸಂಜೆ 5.30 ಗಂಟೆಯವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ತಿಳಿದ್ದಾರೆ. ರಾಜ್ಯದ 31 ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸಂಖ್ಯೆಯ ಕುರಿತಂತೆ, ಸ್ವೀಕರಿಸಿದ ಆಕ್ಷೇಪಣೆ ಹಾಗೂ ಅಹವಾಲುಗಳ ಪರಿಶೀಲನಾ ಅದಾಲತ್ ಅನ್ನು ಮೇ 13ಕ್ಕೆ ಮುಂದೂಡಲಾಗಿದೆ.

ಸಾರ್ವಜನಿಕರು ಆನ್ ಲೈನ್ ಮೂಲಕ ಮನವಿ ಸಲ್ಲಿಸಬಹುದು. ಖುದ್ದಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸುವವರು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ, 3ನೇ ಗೇಟ್, 2ನೇ ಮಹಡಿ, ಕೊಠಡಿ ಸಂಖ್ಯೆ: 222/ಎ, ಬಹುಮಹಡಿ ಕಟ್ಟಡ, ಅಂಬೇಡ್ಕರ್‌ವೀದಿ, ಬೆಂಗಳೂರು-560001 ಇಲ್ಲಿಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು.

ಅದಾಲತ್ ದಿನಾಂಕ, ಸಮಯ

ಜಿಲ್ಲೆಯ ಪ್ರತಿನಿಧಿಗಳು ಮೇ 13ರಂದು ಮಧ್ಯಾಹ್ನ 2.30ರಿಂದ 5 ಗಂಟೆ ವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಚೇರಿಯಲ್ಲಿ ಭಾಗವಹಿಸಬೇಕು. ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿದವರು ಅದಾಲತ್‌ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ, ತಮ್ಮ ಆಧಾರ್‌ಅಥವಾ ಗುರುತಿನ ಚೀಟಿ ಅಥವಾ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯನ್ನು ತಮ್ಮೊಂದಿಗೆ ಕಡ್ಡಾಯವಾಗಿ ತರಬೇಕು ಎಂದು ತಿಳಿಸಿದ್ದಾರೆ.

ನಿಧನ

ಶೇಖರಗೌಡ ಲಕ್ಕನಗೌಡ್ರ



ಸವಣೂರು: ತಾಲೂಕಿನ ಮೆಳ್ಳೆಗಟ್ಟಿ ಗ್ರಾಮದ ಶೇಖರಗೌಡ ನಾಗನಗೌಡ ಲಕ್ಕನಗೌಡ್ರ (85) ಸೋಮವಾರ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಮೂವರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವಿದೆ.

ನೀಲಗಂಗಮ್ಮ ಅಂದಾನಿಗೌಡ್ರ



ಹಾವೇರಿ: ಇಲ್ಲಿಯ ಇಜಾರಿ ಲಕಮಾಪುರದ ನಿವಾಸಿ ನೀಲಗಂಗಮ್ಮ ಬಸವನಗೌಡ ಅಂದಾನಿಗೌಡ್ರ (90) ಮಂಗಳವಾರ ನಿಧನರಾದರು. ಮೃತರಿಗೆ ಓರ್ವ ಪುತ್ರ, ನಾಲ್ಕು ಜನ ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವಿದೆ.

ಪೇಟೆ ಧಾರಣೆ



• ರಾಣಿಬೆನ್ನೂರು	ಕನಿಷ್ಠ	ಗರಿಷ್ಠ
ಶೇಂಗಾ	3760	6894
ಮೆಕ್ಕೆಜೋಳ	1850	1850

ಪ್ರಸರಣ ವಿಭಾಗ
ಕನ್ನಡಪ್ರಭ ಪತ್ರಿಕೆ ಬಂದಿಲ್ಲವೇ? ತಡವಾಗಿ ಬರುತ್ತಿದೆಯೇ?
ನಿಮ್ಮ ಮನೆಗೆ ಪತ್ರಿಕೆ ಹಾಕಿಸಿಕೊಳ್ಳಬೇಕೇ?
ಸಂಪರ್ಕಿಸಿ: ವಿನಯ ಚಿನ್ನಪ್ಪನವರ
9964230094
0836-2252250

ಪಂಚರಾಜ್ಯ ಚುನಾವಣೆಯಲ್ಲಿ ಜಯಭೇರಿ ಬಿಜೆಪಿ ಕಾರ್ಯಕರ್ತರಿಂದ ವಿಜಯೋತ್ಸವ

ಪ್ರಧಾನಮಂತ್ರಿ ನರೇಂದ್ರ ಮೋದಿಜೀಯವರ ಕಾರ್ಯವೈಖರಿಗೆ ಜನ ಬೆಂಬಲ-ಮಾಜಿ ಸಚಿವ ಬಿಸಿಪಾ



ಪಶ್ಚಿಮ ಬಂಗಾಳ ಅಸ್ಸಾಂ ಹಾಗೂ ಪುದುಚೇರಿಯಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಿದ ಹಿನ್ನೆಲೆಯಲ್ಲಿ ಹಿರೇಕೆರೂರು ಪಟ್ಟಣದ ಸರ್ವಜ್ಞ ವೃತ್ತದಲ್ಲಿ ಮಾಜಿ ಸಚಿವ ಬಿ.ಸಿ. ಪಾಟೀಲ ನೇತೃತ್ವದಲ್ಲಿ ಕಾರ್ಯಕರ್ತರು, ಮುಖಂಡರು ವಿಜಯೋತ್ಸವ ಆಚರಿಸಿದರು.

> **ಪಶ್ಚಿಮ ಬಂಗಾಳ ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಬಿಜೆಪಿ ಜಯ ಸಾಧಿಸಿದ್ದು, ಕಾರ್ಯಕರ್ತರಲ್ಲಿ ಹುಮ್ಮಸ್ಸು ಇಮ್ಮಡಿಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಜನಪರ ಆಡಳಿತ, ಆರ್ಥಿಕ ಹಾಗೂ ವಿದೇಶಾಂಗ ನೀತಿಗಳು ದೇಶದ ಜನತೆಗೆ ಮೆಚ್ಚುಗೆಗೆ ಪಾತ್ರವಾಗಿರುವುದು ಹಾಗೂ ಬಿಜೆಪಿ ತತ್ವಸಿದ್ಧಾಂತಗಳು, ಜನಮಾನಸಕ್ಕೆ ಹತ್ತಿರವಾಗಿರುವುದು ಈ ಫಲಿತಾಂಶದಿಂದ ಸ್ಪಷ್ಟವಾಗಿದೆ.**
> • **ಬಿ.ಸಿ. ಪಾಟೀಲ** ಮಾಜಿ ಸಚಿವ

• **ಕನ್ನಡಪ್ರಭ ವಾರ್ತೆ** ಹಿರೇಕೆರೂರು

ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಸರ್ವಜ್ಞ ವೃತ್ತದಲ್ಲಿ ಮಾಜಿ ಸಚಿವ ಬಿ.ಸಿ. ಪಾಟೀಲ ನೇತೃತ್ವದಲ್ಲಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಈ ವೇಳೆ ಮಾತನಾಡಿದ ಮಾಜಿ ಸಚಿವ ಬಿ.ಸಿ. ಪಾಟೀಲ, ಪ್ರಧಾನಮಂತ್ರಿ ನರೇಂದ್ರ ಮೋದಿಜೀಯವರ ಕಾರ್ಯವೈಖರಿಗೆ ಜನ ಬೆಂಬಲ ಸೂಚಿಸಿದ್ದಾರೆ. ಪಶ್ಚಿಮ ಬಂಗಾಳ ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಬಿಜೆಪಿ ಜಯ ಸಾಧಿಸಿದ್ದು, ಕಾರ್ಯಕರ್ತರಲ್ಲಿ ಹುಮ್ಮಸ್ಸು ಇಮ್ಮಡಿಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಜನಪರ ಆಡಳಿತ, ಆರ್ಥಿಕ ಹಾಗೂ ವಿದೇಶಾಂಗ ನೀತಿಗಳು ದೇಶದ ಜನತೆಗೆ ಮೆಚ್ಚುಗೆಗೆ ಪಾತ್ರವಾಗಿರುವುದು ಹಾಗೂ ಬಿಜೆಪಿ ತತ್ವಸಿದ್ಧಾಂತಗಳು, ಜನಮಾನಸಕ್ಕೆ ಹತ್ತಿರವಾಗಿರುವುದು ಈ ಫಲಿತಾಂಶದಿಂದ ಸ್ಪಷ್ಟವಾಗಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಸಂಜೀವಯ್ಯ ಕಬ್ಬಿಣಕಂತಿಮಠ, ಜಿ.ಪಿ. ಪ್ರಕಾಶ, ರವಿಶಂಕರ ಬಾಳಿಕಾಯಿ, ಗುರುಶಾಂತ ಎತ್ತಿನಹಳ್ಳಿ, ಹರೀಶ ಕಲಾಲ್, ಶಿವಕುಮಾರ ತಿಪ್ಪಶೆಟ್ಟಿ, ಜಗದೀಶ ದೊಡ್ಡಗೌಡ್ರ, ಆನಂದಪ್ಪ ಹಾದಿಮನಿ, ಪುಟ್ಟನಗೌಡ ಪಾಟೀಲ, ಚನ್ನೇಶ ದಿವೀಗಿಹಳ್ಳಿ, ಬಸವರಾಜ ಭರಮಗೌಡ್ರ, ಮಂಜು ಹೊಸಗೌಡ್ರ, ಜಿಲಾನಿ ಬಳಿಗಾರ, ಬಸವರಾಜ ಬಿದರಿ, ಸಿ.ಎಸ್. ಚಳಗೇರಿ, ಸತೀಶ ಕೋರಿಗೌಡ್ರ, ಈರಣ್ಣ ಚಿಟ್ಟೂರ, ಹೊನ್ನಪ್ಪ ಸಾಲಿ, ರಮೇಶ ಮೇಗಳಮನಿ, ಯಸೋದರ್ ಸಾಬಲೂರು, ನಾಗರಾಜ ಮಳೂರು, ಪ್ರವೀಣ ತಳವಾರ, ಪಕ್ಷದ ಮುಖಂಡರು ಹಾಜರಿದ್ದರು.

ಕಾಯಕದಿಂದ ಸ್ವಾನುಭಾವದ ಬದುಕು-ಹೊಸಮಠದ ಶ್ರೀ



ಹಾವೇರಿ ಹೊಸಮಠದ ಬಸವಕೇಂದ್ರದಲ್ಲಿ ಶನಿವಾರ ಸಂಜೆ ಜರುಗಿದ ಶರಣ ಸಂಗಮ ಹಾಗೂ ಕಾಯಕ ದಿನಾಚರಣೆಯಲ್ಲಿ ಶ್ರಮಜೀವಿಗಳನ್ನು ಗೌರವಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಹಾವೇರಿ

ಸ್ವಾಭಿಮಾನದ ಕಾಯಕದೊಂದಿಗೆ ಸ್ವಾನುಭಾವದ ಬದುಕು ರೂಪಿಸುವ ಮೂಲಕ ಶರಣ ಸಂಸ್ಕೃತಿಯೇ ಶ್ರಮ ಸಂಸ್ಕೃತಿ ಎಂದು ಸಾರಿದ ಹೆಗ್ಗಳಿಕೆ ಅನುಭವ ಮಂಟಪಕ್ಕೆ ಸಲ್ಲುತ್ತದೆ ಎಂದು ಹೊಸಮಠದ ಬಸವ ಶಾಂತಲಿಂಗ ಸ್ವಾಮೀಜಿ ಹೇಳಿದರು.

ಇಲ್ಲಿಯಹೊಸಮಠದಬಸವಕೇಂದ್ರದಲ್ಲಿ ಶನಿವಾರ ಸಂಜೆ ಜರುಗಿದ ಶರಣ ಸಂಗಮ ಹಾಗೂ ಕಾಯಕ ದಿನಾಚರಣೆ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಶ್ರಮಜೀವಿಗಳ ತ್ಯಾಗ, ಸಮರ್ಪಣೆ ಮತ್ತು ಸಮಾಜ ನಿರ್ಮಾಣದಲ್ಲಿ ಅವರನ್ನು ಗೌರವಿಸುವ ದಿನವಾಗಿದೆ.

ಶ್ರಮಿಕ ವರ್ಗವನ್ನು ಗೌರವಿಸಿದ ಬಸವಾದಿ ಪ್ರಮಥರು ಕಾಯಕ ಮತ್ತು ದಾಸೋಹ ಸಿದ್ಧಾಂತವನ್ನು ಸಾರಿದರು. ಹೊಟ್ಟೆ ಹಸಿವು ಬದುಕಿನಲ್ಲಿ ಅನೇಕ ಪಾಠ ಕಲಿಸುತ್ತದೆ. ಸತ್ಯ ಶುದ್ಧ ಕಾಯಕ ಜೀವನವನ್ನುಸದಾಕಾಯುತ್ತದೆಎಂಬುದನ್ನು ತಿಳಿಸಿಕೊಟ್ಟರು. ಕಾಯಕದೊಳು ನಿರತರಾಗಿ ಅಲ್ಲಿಯೇ ದೇವರನ್ನು ಕಾಣುವ ಶರಣರ ನಡೆ ಸದಾ ಸ್ಫೂರ್ತಿಯ ಚಿಲುಮೆ ಎಂದರು.

ದಲಿತ ಮುಖಂಡ ಉಡಚಪ್ಪ ಮಾಳಗಿ ಮಾತನಾಡಿ, ಕಾರ್ಮಿಕರು ದೇಶದ ಪ್ರಗತಿಗೆ ಶ್ರಮಿಸುತ್ತಿರುವರು. ಸರ್ಕಾರ ಜಾರಿಗೊಳಿಸಿರುವ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ತಾವೂ ಪ್ರಗತಿಯತ್ತ ಸಾಗಬೇಕು ಎಂದರು.

ಸಾಮಾಜಿಕ ಹೋರಾಟಗಾರ ಪರಶುರಾಮ ಹರ್ಲಾಪುರ ಮಾತನಾಡಿ, ಕಾರ್ಮಿಕರುತಮ್ಮ ಬದುಕುರೂಪಿಸಿಕೊಳ್ಳಲು ಸದಾ ಶ್ರಮಿಸುವರು. ಅವರ ಶ್ರಮದಲ್ಲೇ ದೇಶದ ಹಿತವೂ ಅಡಗಿದೆ.

> ■ ಶ್ರಮಿಕ ವರ್ಗವನ್ನು ಗೌರವಿಸಿದ ಬಸವಾದಿ ಪ್ರಮಥರು ಕಾಯಕ ಮತ್ತು ದಾಸೋಹ ಸಿದ್ಧಾಂತವನ್ನು ಸಾರಿದರು. ಹೊಟ್ಟೆ ಹಸಿವು ಬದುಕಿನಲ್ಲಿ ಅನೇಕ ಪಾಠ ಕಲಿಸುತ್ತದೆ. ಸತ್ಯ ಶುದ್ಧ ಕಾಯಕ ಜೀವನವನ್ನು ಸದಾ ಕಾಯುತ್ತದೆ ಎಂಬುದನ್ನು ತಿಳಿಸಿಕೊಟ್ಟರು.

ಅಂಥ ಶ್ರಮಿಕರನ್ನು ಶ್ರೀ ಮಠದಿಂದ ಗೌರವಿಸುತ್ತಿರುವುದು ಸಮಯೋಚಿತ ಎಂದರು.

ಆಂಬ್ಯುಲೆನ್ಸ್ ವಾಹನಗಳ ಸಂಘದ ಅಧ್ಯಕ್ಷ ಮಾರುತಿ ಬಣಕಾರ ಮಾತನಾಡಿ, ಕಾಯಕ ದಿನಾಚರಣೆ ನಿಮಿತ್ತ ಶ್ರೀಮಠದಿಂದ ಗೌರವ ಸ್ವೀಕರಿಸಿರುವುದು ನಮಗೆ ಅಭಿಮಾನ ಮೂಡಿಸಿದೆ ಎಂದರು.

ಇದೇ ಸಂದರ್ಭದಲ್ಲಿ ಪಾದರಕ್ಷೆ ಕಾಯಕಯೋಗಿ ಯಲ್ಲಪ್ಪ ಉಕ್ಕುಂದ, ಕಟ್ಟಡ ನಿರ್ಮಾಣ ಕಾಯಕಯೋಗಿ ಶಿವಪ್ಪ ಹಂಚಿ, ಮಹಿಳಾ ಕಾಯಕಯೋಗಿ ಸುಧಾ ಕಲಾಟೆ, ಪತ್ರಿಕಾ ವಿತರಣಾ ಕಾಯಕಯೋಗಿ ಗೂಳಪ್ಪ ಹಳಕೊಪ್ಪ, ಪೌರಕಾರ್ಮಿಕಕಾಯಕಯೋಗಿ ದುರ್ಗೇಶ ತಿಮ್ಮಾಪುರ, ರವಿ ಭೂದಗಟ್ಟಿ, ಶ್ರೀಮಠದ ಕಾಯಕಯೋಗಿ ಲಕ್ಷ್ಮಣ ಈಳಗೇರ ಅವರನ್ನು ಗೌರವಿಸಲಾಯಿತು.

ಕಮಲಾ ಬುಕ್ಕಶೆಟ್ಟಿ, ರಕ್ಷಿತಾ ಮಡಿವಾಳರ, ಶಶಿಕಲಾ ಬೈಲಣ್ಣನವರ, ಶಾಂತಕ್ಕ ಶಿರೂರ, ಸುಜ್ಞಾನದೇವಿ ಮಠದ, ಶಿವಶರಣಮ್ಮ ಲಕ್ಕಣ್ಣನವರ, ಮಂಜುಳಾ ಕಡ್ಡಿ, ಶಾಂತಾ ಮಡಿವಾಳರ, ಮಲ್ಲೇಶ ಎಚ್. ಉಪಸ್ಥಿತರಿದ್ದರು. ನಿಂಗಪ್ಪ ಆರೇರ ನಿರೂಪಿಸಿದರು. ಗೂಳಪ್ಪ ಅರಳಿಕಟ್ಟಿ ವಂದಿಸಿದರು.

ಬ್ಯಾಡಗಿಯಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮ



3 ರಾಜ್ಯಗಳಲ್ಲಿ ಬಿಜೆಪಿ ಸ್ಪಷ್ಟ ಬಹುಮತದೊಂದಿಗೆ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಬ್ಯಾಡಗಿ ಪಟ್ಟಣದಲ್ಲಿ ಬಿಜೆಪಿ ತಾಲೂಕು ಮಂಡಳದ ವತಿಯಿಂದ ಭವ್ಯ ಸಂಭ್ರಮಾಚರಣೆ ನಡೆಯಿತು.

• **ಕನ್ನಡಪ್ರಭ ವಾರ್ತೆ** ಬ್ಯಾಡಗಿ

ಪಂಚ ರಾಜ್ಯಗಳ ಚುನಾವಣೆಯಲ್ಲಿ ಮೂರು ರಾಜ್ಯದಲ್ಲಿ ಬಿಜೆಪಿ ಸ್ಪಷ್ಟ ಬಹುಮತದೊಂದಿಗೆ ಭರ್ಜರಿ ಜಯಭೇರಿ ಸಾಧಿಸಿದ ಹಿನ್ನೆಲೆಯಲ್ಲಿ ಬಿಜೆಪಿ ತಾಲೂಕು ಮಂಡಳದ ವತಿಯಿಂದ ಭವ್ಯ ಸಂಭ್ರಮಾಚರಣೆ ನಡೆಯಿತು.

ಪಟ್ಟಣದ ಹಳೇ ಪುರಸಭೆ ಆವರಣದಲ್ಲಿ ಸೇರಿದ್ದ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು. ಪಕ್ಷದ ಧ್ವಜಗಳನ್ನು ಬೀಸುತ್ತಾ 'ಭಾರತ ಮಾತಾ ಕೀ ಜೈ' ಬಿಜೆಪಿ ಜಿಂದಾಬಾದ್' ಎಂಬ ಘೋಷಣೆಗಳನ್ನು ಕೂಗಿ ಸಂಭ್ರಮ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಬಿಜೆಪಿ ತಾಲೂಕಾಧ್ಯಕ್ಷ ನಿಂಗಪ್ಪ ಬಟ್ಟಲಕಟ್ಟಿ, ದೇಶದ ವಿವಿಧ ಭಾಗಗಳಲ್ಲಿ ಜನರು ಅಭಿವೃದ್ಧಿ ಪರ ಆಡಳಿತಕ್ಕೆ ಮನ್ನಣೆ ನೀಡಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಅಶಾಂತಿ ಮತ್ತು ವಿಭಜನೆಯ ರಾಜಕಾರಣ ನಡೆಸುತ್ತಿದ್ದವರಿಗೆ ಈ ಬಾರಿ ಜನತೆ ತಕ್ಕ ಉತ್ತರ ನೀಡಿದ್ದಾರೆ. ಒಂದು ವರ್ಗದ ತುಷ್ಟೀಕರಣ ರಾಜಕಾರಣವನ್ನು ಜನರು ತಿರಸ್ಕರಿಸಿದ್ದಾರೆ. ಮುಂದಿನ ದಿನಗಳಲ್ಲಿ ಬಂಗಾಳದಲ್ಲಿ ಶಾಂತಿ ಮತ್ತು ಅಭಿವೃದ್ಧಿಗೆ ದಾರಿ ತೆರೆದುಕೊಳ್ಳಲಿದೆ ಎಂದು ಹೇಳಿದರು.

ಪುರಸಭೆ ಮಾಜಿ ಸದಸ್ಯೆ ಕಲಾವತಿ ಬಡಿಗೇರ ಮಾತನಾಡಿ, ಪಂಚ ರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿ ಅಭೂತ ಪೂರ್ವ ಸಾಧನೆ ಮಾಡಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದ ಮೇಲೆ ಜನತೆ ಇಟ್ಟಿರುವ ವಿಶ್ವಾಸದ ಪ್ರತಿಫಲವಾಗಿದೆ. ಅಭಿವೃದ್ಧಿ ಸುಶಾಸನ ಮತ್ತು ರಾಷ್ಟ್ರಾಭಿಮಾನವೇ ಬಿಜೆಪಿಯ ಬಲವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಜನಪರ ಕಾರ್ಯಕ್ರಮಗಳು ಜಾರಿಗೆ ಬರಲಿವೆ ಎಂದು ಹೇಳಿದರು.

ಈ ವೇಳೆ ಶಿವಾನಂದ ಯಮನಕ್ಕವರ, ವಿಷ್ಣುಕಾಂತ ಬೆನ್ನೂರ, ವಿಜಯ ಮಾಳಗಿ, ವಿನಯ ಹಿರೇಮಠ, ಸುರೇಶ ಉದ್ಯೋಗಣ್ಣನವರ, ಹಾಲೇಶ ಜಾಧವ, ಪರಶುರಾಮ ಉಜನಿಕೊಪ್ಪ, ನಾಗರಾಜ ಹಾವನೂರ, ನಿಂಗಪ್ಪ ಆಡಿನವರ, ಹನುಮಂತ ಮ್ಯಾಗೇರಿ, ಸರೋಜಾ ಉಳ್ಳಾಗಡ್ಡಿ, ಜ್ಯೋತಿ ಕುದರಿಹಾಳ ಸೇರಿದಂತೆ ಪಕ್ಷದ ವಿವಿಧ ಪದಾಧಿಕಾರಿಗಳು, ಯುವ ಮೋರ್ಚಾ ಹಾಗೂ ಮಹಿಳಾ ಮೋರ್ಚಾ ಕಾರ್ಯಕರ್ತರಿದ್ದರು.

ಕೂಲಿಕಾರರಿಂದ ಗಾಂಧೀಜಿ, ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ

ಬ್ಯಾಡಗಿ: ಮಹಾತ್ಮ ಗಾಂಧೀಜಿ ಮತ್ತು ಡಾ. ಬಿ.ಆರ್. ಅಂಬೇಡ್ಕರ್‌ಅವರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ, ಸಿಹಿ ಹಂಚುವ ಮೂಲಕ ವಿಶ್ವ ಕಾರ್ಮಿಕರ ದಿನವನ್ನು ತಾಲೂಕಿನ ಬನ್ನಿಹಟ್ಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಬಹಳ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ವೇಳೆ ಮಾತನಾಡಿದ ತಾಪಂ. ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ. ಮಲ್ಲಿಕಾರ್ಜುನ, ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಕೊಡುಗೆ ಅಪಾರವಾಗಿದೆ, ಕಾರ್ಮಿಕರಿಲ್ಲದೆ ದೇಶದ ಪ್ರಗತಿಯನ್ನು ಊಹಿಸಲು ಸಾಧ್ಯವಿಲ್ಲ, ಯಾವುದೇ ಒಂದು ದೇಶ ಅಭಿವೃದ್ಧಿಯಾಗಬೇಕಾದಲ್ಲಿ ಕಾರ್ಮಿಕರ ಕೊಡುಗೆ ಅಪಾರವಾಗಿರುತ್ತದೆ. ಅವರಿಲ್ಲದೇ ಯಾವುದೇ ದೇಶ ಅಭಿವೃದ್ಧಿ ಸರಿಯಾದ ದಿಕ್ಕಿನಲ್ಲಿ ಸಾಗಲು ಸಾಧ್ಯವಿಲ್ಲ ಎಂದರು. ನರೇಗಾ ಯೋಜನೆಯಡಿ ಕಾಮಗಾರಿಗಳಿಗೆ ಎನ್‌ಎಂಎಂಎಸ್ ಹಾಜರಾತಿ ವ್ಯವಸ್ಥೆ ಅಳವಡಿಸಲಾಗಿದ್ದು, ಪ್ರತಿಯೊಬ್ಬ ಕೂಲಿ ಕಾರ್ಮಿಕರು ತಮ್ಮ ವೈಯಕ್ತಿಕ ಫೋಟೋ ತೆಗೆಸಿಕೊಳ್ಳುವುದು ಕಡ್ಡಾಯವಾಗಿದೆ, ಇದರಿಂದ ವೇತನದ ಸಮಸ್ಯೆ ಎದುರಾಗುವುದಿಲ್ಲ ಎಂದರಲ್ಲದೇ, ಗ್ರಾಮದಲ್ಲೇ ಉದ್ಯೋಗ ನೀಡುವ ಮೂಲಕ ಕೂಲಿಕಾರರು ಬೇರೆಡೆ ಗುಳೆ ಹೋಗುವುದನ್ನು ತಡೆಗಟ್ಟಲಾಗುತ್ತಿದೆ. ಎಲ್ಲರೂ ಈ ಯೋಜನೆಯ ಸದುಪಯೋಗ ಪಡೆಯಬೇಕು, ಬೇಸಿಗೆ ಇರುವುದರಿಂದ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಿ, ಸಾಕಷ್ಟು ನೀರು ಕುಡಿಯುವಂತೆ ಸಲಹೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಪಿಡಿಒ ವಿದ್ಯಾವತಿ, ಸಹಾಯಕ ನಿರ್ದೇಶಕ ಎಂ.ಎ. ಆಗಸರ, ಐಇಸಿ ಸಂಯೋಜಕ ಅಕ್ಷಯ ದೇಶಪಾಂಡೆ, ವನಸಿರಿ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಮುಖ್ಯಸ್ಥ ಎಸ್.ಡಿ. ಬಳಿಗಾರ, ಕೂಲಿ ಕಾರ್ಮಿಕರ ಸಂಘದ ಅಧ್ಯಕ್ಷೆ ಗುತ್ತೆಮ್ಮ ಸುಣಗಾರ, ಉಪಾಧ್ಯಕ್ಷೆ ನಾಗಮ್ಮ ಮಲ್ಲಳ್ಳಿ, ನಾಗರಾಜ ಬಿದರಿ ಉಪಸ್ಥಿತರಿದ್ದರು.



ವಿಶ್ವ ಕಾರ್ಮಿಕರ ದಿನವನ್ನು ಕಾರ್ಯಕ್ರಮವನ್ನುದ್ದೇಶಿಸಿ ತಾಪಂ. ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ. ಮಲ್ಲಿಕಾರ್ಜುನ ಮಾತನಾಡಿದರು.

ಸನ್ಮಾನ... ನಿವೃತ್ತ ಯೋಧ ರೇವಣಪ್ಪ ದ್ಯಾಮಕ್ಕನವರ ಸನ್ಮಾನ ಸಮಾರಂಭ

ದೇಶ ಕಾಯುವ ಯೋಧ, ಅನ್ನ ನೀಡುವ ರೈತ ಮಣ್ಣಿನ ಉಸಿರು

• **ಕನ್ನಡಪ್ರಭ ವಾರ್ತೆ** ಹಿರೇಕೆರೂರು

ಜೈ ಜವಾನ್ ಜೈ ಕಿಸಾನ್ ಎಂಬ ಉಕ್ತಿಯಂತೆ ದೇಶ ಕಾಯುವ ಯೋಧ, ದೇಶಕ್ಕೆ ಅನ್ನ ನೀಡುವ ರೈತ ಈ ಮಣ್ಣಿನ ಉಸಿರು ಈ ನಿಟ್ಟಿನಲ್ಲಿ ಆಲದಗೇರಿ ಗ್ರಾಮದ ನಿಮ್ಮ ಮನೆ ಮಗ ರೇವಣಪ್ಪ ದ್ಯಾಮಕ್ಕನವರ ಸುದೀರ್ಘ 42 ವರ್ಷಗಳ ಕಾಲ ದೇಶದ ಗಡಿಭಾಗಗಳನ್ನು ಕಾಯ್ದು ನಿವೃತ್ತರಾಗಿ ಹುಟ್ಟೂರಿನಲ್ಲಿ ಅದ್ದೂರಿಯಾಗಿ ಸನ್ಮಾನಿತರಾಗಿರುವುದು ಎಲ್ಲಾ ಪದವಿಗಿಂತ ದೊಡ್ಡದು. ಅವರ ಈ ಸೇವೆ ಇಂದಿನ ಯುವಕರಿಗೆ ಪ್ರೇರಣೆಯಾಗಬೇಕು ಎಂದು ಮಾಜಿ ಸಚಿವ ಬಿ.ಸಿ. ಪಾಟೀಲ ಹೇಳಿದರು.

ತಾಲೂಕಿನ ಆಲದಗೇರಿ ಗ್ರಾಮದಲ್ಲಿ ನಡೆದ ನಿವೃತ್ತ ಸೈನಿಕ ರೇವಣಪ್ಪ ದ್ಯಾಮಕ್ಕನವರ್‌ಅವರ ಅಭಿನಂದನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ಮಕ್ಕಳಿಗೆ ವಾಘಾ ಗಡಿ ಪ್ರದೇಶದಲ್ಲಿ ನಡೆಯುವ ಕವಾಯಿತ ಪ್ರದರ್ಶನ ತೋರಿಸುವ ಮೂಲಕ ದೇಶಭಕ್ತಿ ಪ್ರೇಮವನ್ನು ಹೆಚ್ಚಿಸಬೇಕು. ಈ ದೇಶ ಸೇವೆಗೆ ತನ್ನ ಪತಿ ಮಕ್ಕಳನ್ನು ಕಳಿಸಿ ಒಂಟಿ ಜೀವನ ನಡೆಸಿದ ರೇಣುಕವ್ವ ರೇವಣಪ್ಪ ದ್ಯಾಮಕ್ಕನವರ ಧೈರ್ಯವನ್ನು ನಾವೆಲ್ಲರೂ ಮೆಚ್ಚಿಕೊಳ್ಳಬೇಕು. ಈ ನಿಟ್ಟಿನಲ್ಲಿ ಎಲ್ಲ ತಾಯಂದಿರು ತಮ್ಮ ಮಕ್ಕಳನ್ನು ದೇಶ ಸೇವೆಗೆ ಕಳಿಸಲು ಯಾವತ್ತು ಹಿಂದೇಟು ಹಾಕದೆ ದೇಶ ಪ್ರೇಮವನ್ನು ತುಂಬಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಉಪನ್ಯಾಸಕ ಮಂಜುನಾಥ ಚಲವಾದಿ, ಭಾರತ ದೇಶ ನೌಕಾಪಡೆ, ವಾಯುಸೇನೆ, ಭೂಸೇನೆ ಮೂರು ಪ್ರಮುಖ ಅಂಗಗಳು ದೇಶವನ್ನು ರಕ್ಷಿಸುವಲ್ಲಿ ಸಮರ್ಥವಾಗಿವೆ. ಈ ನಿಟ್ಟಿನಲ್ಲಿ ಈ ಗ್ರಾಮದ ಮಣ್ಣಿನ ಮಗ 42 ವರ್ಷ ದೇಶ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಕಾರಣ ಹಬ್ಬದ ರೀತಿಯಲ್ಲಿ ಗ್ರಾಮಸ್ಥರು ಸೇರಿ ಸನ್ಮಾನಿಸಿದ ಹಿರಿಮೆ ದೊಡ್ಡದು. ಅವರ ದೇಶಭಕ್ತಿಯನ್ನು ನಾವೆಲ್ಲರೂ ಮೆಚ್ಚಿಕೊಳ್ಳಬೇಕು ಎಂದರು.

ಅಧ್ಯಕ್ಷತೆಯನ್ನು ರೇಣುಕವ್ವ ರೇವಣೆಪ್ಪ ದ್ಯಾಮಕ್ಕನವರ ವಹಿಸಿದ್ದರು. ಹಿರೇಕೆರೂರು ಬಿಜೆಪಿ ಘಟಕದ ಅಧ್ಯಕ್ಷ ಸಂಜೀವಯ್ಯ ಕಬ್ಬಿಣಕಂತಿಮಠ, ಪ್ರಕಾಶ ಗೌಡರ, ರವಿಶಂಕರ ಬಾಳಿಕಾಯಿ, ಸೈನಿಕರಾದ ರಾಘು ದ್ಯಾಮಕ್ಕನವರ್, ಮಹೇಶ್ ಕರಬುಳ್ಳವರ್, ಮುಖಂಡರಾದ ಚೌಡಪ್ಪ ದ್ಯಾಮಕ್ಕಳವರ, ಮಂಜುನಾಥ ದ್ಯಾಮಕ್ಕನವರ, ವಿನಾಯಕ ಗೌಡರ, ಚಂದ್ರಪ್ಪ ಬೂತನವರ, ಶಿವರಾಜಕುಮಾರ ಯಡಚಿ, ಕುಬೇರಪ್ಪ ಗೌಡರ, ಕುಮಾರ್‌ಮಾಸಣಗಿ, ಬಸನಗೌಡ ಗೌಡರ, ಕರಿಯಪ್ಪ ಚಲವಾದಿ, ರಾಜು ಹುಬ್ಬಳ್ಳಿ ಇದ್ದರು. ಹಾಗೂ ಹುಚ್ಚಪ್ಪ ದ್ಯಾಮಕ್ಕನವರ ಸ್ವಾಗತಿಸಿದರು. ಡಾ. ಮಾಲತೇಶ ಚಲವಾದಿ ನಿರೂಪಿಸಿದರು.



ಹಿರೇಕೆರೂರು;ತಾಲೂಕಿನ ಆಲದಗೇರಿ ಗ್ರಾಮದಲ್ಲಿ ನಡೆದ ನಿವೃತ್ತ ಸೈನಿಕ ರೇವಣಪ್ಪ ದ್ಯಾಮಕ್ಕನವರ್‌ಅವರ ಅಭಿನಂದನಾ ಸಮಾರಂಭ ದಲ್ಲಿ ಮಾಜಿ ಸಚಿವ ಬಿ.ಸಿ.ಪಾಟೀಲ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ

ಬಿಎಸ್‌ವೈ ಅಭಿಮಾನೋತ್ಸವಕ್ಕೆ ಜಿಲ್ಲೆಯಿಂದ 50 ಸಾವಿರ ಜನ

ಹಾವೇರಿಯಲ್ಲಿ ಮಾಜಿ ಸಚಿವ ಬಿ.ಸಿ. ಪಾಟೀಲ ಹೇಳಿಕೆ

• **ಕನ್ನಡಪ್ರಭ ವಾರ್ತೆ** ಹಾವೇರಿ

ಕರ್ನಾಟಕ ಬಿಜೆಪಿಯ ಭೀಷ್ಮ, ದಕ್ಷಿಣ ಭಾರತದಲ್ಲಿ ಕಮಲ ಅರಳಿಸಿದ ರೂವಾರಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ರಾಜ್ಯ



ರಾಜ್ಯಕಾರಣದಲ್ಲಿ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಚಿತ್ರದುರ್ಗದಲ್ಲಿ ಮೇ 9ರಂದು ಹಮ್ಮಿಕೊಂಡಿರುವ ಅಭಿಮಾನೋತ್ಸವದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಲ್ಗೊಳ್ಳಲಿದ್ದು, ಜಿಲ್ಲೆಯಿಂದ 50 ಸಾವಿರಕ್ಕೂ ಹೆಚ್ಚು ಜನರು ತೆರಳಲಿದ್ದಾರೆ ಎಂದು ಮಾಜಿ ಸಚಿವ ಬಿ.ಸಿ. ಪಾಟೀಲ ಹೇಳಿದರು.

ನಗರದ ಕಾಗಿನೆಲೆ ರಸ್ತೆಯಲ್ಲಿರುವ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿ.ಎಸ್.ಯಡಿಯೂರಪ್ಪ ಅವರು ನಾಲ್ಕು ಬಾರಿ ಸಿಎಂ ಆಗಿ ರಾಜ್ಯಕ್ಕೆ ಸೇವೆ ಸಲ್ಲಿಸಿದ್ದು, ಅವರ ಅಭಿಮಾನೋತ್ಸವ ಕಾರ್ಯಕ್ರಮದ ಮೂಲಕ ಮುಂದಿನ ಚುನಾವಣೆಗೆ ಬಿಜೆಪಿ ರಣಕಹಳೆ ಮೊಳಗಿಸಲಿದೆ. ಜತೆಗೆ, ಕಾಂಗ್ರೆಸ್‌ಗೆ ಎಚ್ಚರಿಕೆಯ ಸಂದೇಶವೂ ರವಾನೆಯಾಗಲಿದೆ. ಕಾರ್ಯಕ್ರಮದಲ್ಲಿ ಸುಮಾರು 10 ಲಕ್ಷ ಜನರು ಪಾಲ್ಗೊಳ್ಳುವ ನಿರೀಕ್ಷೆ ಇದ್ದು, ಜಿಲ್ಲೆಯಿಂದಲೂ ಸಹ 50 ಸಾವಿರಕ್ಕೂ ಹೆಚ್ಚು ಜನರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಬಿಜೆಪಿ ಕಾರ್ಯಕರ್ತರ ಪಕ್ಷವಾಗಿದ್ದು, ಬಿಎಸ್‌ವೈ ನಮ್ಮ ಶಕ್ತಿ, ಈ ಮೂಲಕ ಪಕ್ಷದ ಕಾರ್ಯಕರ್ತರಿಗೆ ಸಂಘಟನೆ ಮಾಡುವಂತೆ ಸಂದೇಶ ನೀಡುವ ಜತೆಗೆ ಕಾಂಗ್ರೆಸ್ ಸರ್ಕಾರದ ದುರಾಡಳಿತದಿಂದ ರಾಜ್ಯದ ಬೇಸತ್ತಿದ್ದಾರೆ. ಹೀಗಾಗಿ ಕಾಂಗ್ರೆಸ್ ಸರ್ಕಾರಕ್ಕೂ ಈ ಸಮಾವೇಶ ಎಚ್ಚರಿಕೆ ಗಂಟೆಯಾಗಲಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ವಿರೂಪಾಕ್ಷಪ್ಪ ಬಳ್ಳಾರಿ ಮಾತನಾಡಿ, ಈಗಾಗಲೇ ಅಭಿಮಾನೋತ್ಸವಕ್ಕೆ ಸಕಲ ಸಿದ್ಧತೆ ನಡೆಸಿದ್ದೇವೆ. ಚಿತ್ರದುರ್ಗ ಇಲ್ಲಿಂದ ಸುಮಾರು 130-140 ಕಿಮೀ ದೂರದಲ್ಲಿದ್ದು, ಅಗತ್ಯ ಬಸ್ ಸೌಲಭ್ಯ ಮಾಡಲಾಗುತ್ತಿದೆ. ಆದಾಗ್ಯೂ ಸಾಕಷ್ಟು ಜನರು ತಮ್ಮ ವೈಯಕ್ತಿಕ ವಾಹನದಲ್ಲಿ ತೆರಳುವುದಾಗಿ ತಿಳಿಸಿದ್ದಾರೆ. ಸುಮಾರು 50-55 ಸಾವಿರ ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಶಿವರಾಜ ಸಜ್ಜನರ, ಭರತ ಬೊಮ್ಮಾಯಿ, ಭೋಜರಾಜ ಕರೂದಿ, ವಿಜಯಕುಮಾರ ಚಿನ್ನಿಕಟ್ಟಿ, ನಿರಂಜನ ಹೇರೂರ ಮತ್ತಿತರರು ಇದ್ದರು.

> **ಹಿರೇಕೆರೂರು ತಾಲೂಕಿನ ಸುಮಾರು 23 ಗ್ರಾಪಂಗಳ ಬೆಳೆವಿಮೆ ಬಂದಿಲ್ಲ, ಇದನ್ನು ಖಂಡಿಸಿ ಮೇ 6ರಂದು ಹಿರೇಕೆರೂರಿನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಬೆಳೆ ನಷ್ಟವಾಗಿದ್ದು, ಈ ಕುರಿತು ಬೆಳೆವಿಮೆ ಪರಿಹಾರ ಕೊಡಿಸುವಲ್ಲಿ ಕೃಷಿ, ಕಂದಾಯ ಮತ್ತು ಸಾಂಖ್ಯಿಕ ಇಲಾಖೆ ವಿಫಲವಾಗಿವೆ. ಬೆಳೆ ವಿಮೆಯಿಂದ ರೈತರು ವಂಚಿತರಾಗಿದ್ದು, ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರವೇ ರೈತನ ರಕ್ತ ಕುಡಿಯುತ್ತಿದೆ. ಸಕಾಲಕ್ಕೆ ಗೊಬ್ಬರ ಸಿಗುತ್ತಿಲ್ಲ. ದಿನಕ್ಕೊಂದು ಹೊಸ ನಿಯಮ ಮಾಡುತ್ತಿದ್ದು, ಇದೀಗ ಗೊಬ್ಬರಕ್ಕೆ ಎಫ್‌ಐಡಿ ಮತ್ತು ಲಿಂಕ್ ಎಂಬುದನ್ನು ತಂದಿದ್ದಾರೆ.**
>
> • **ಬಿ.ಸಿ. ಪಾಟೀಲ** ಮಾಜಿ ಸಚಿವರು

ಚಲಿಸುತ್ತಿದ್ದ ಬಸ್ಸಿಗೆ ಬೆಂಕಿ: ಎಲ್ಲಾ ಪ್ರಯಾಣಿಕರು ಪಾರು

• **ಕನ್ನಡಪ್ರಭ ವಾರ್ತೆ** ರಾಣೆಬೆನ್ನೂರು



ಬೆಂಗಳೂರಿನಿಂದ ಗದಗ ಕಡೆಗೆ ತೆರಳುತ್ತಿದ್ದ ರಾಜ್ಯ ಸಾರಿಗೆ ಸಂಸ್ಥೆಗೆ ಸೇರಿದ ಪಲ್ಲಕ್ಕಿ ಬಸ್‌ಗೆ ಬೆಂಕಿ ತಗುಲಿ ಅದು ಸಂಪೂರ್ಣ ಸುಟ್ಟು ಭಸ್ಮವಾದ ಘಟನೆ ಮಂಗಳವಾರ ಬೆಳಗ್ಗೆ ತಾಲೂಕಿನ ದೇವರಗುಡ್ಡ ಬಳಿ ಹೊನ್ನಾಳಿ-ಗದಗ ರಸ್ತೆಯಲ್ಲಿ ಸಂಭವಿಸಿದೆ.

ಸುದೈವವಶಾತ್ ಚಾಲಕನ ಸಮಯ ಪ್ರಜ್ಞೆಯಿಂದ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಎಲ್ಲಾ 13 ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬಸ್‌ನ ಚಕ್ರದ ಹತ್ತಿರ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆಯೇ ಚಾಲಕ ಎಲ್ಲ ಪ್ರಯಾಣಿಕರನ್ನು ಜಾಗೃತಗೊಳಿಸಿ ಬಸ್ಸಿನಿಂದ ಅವರೆಲ್ಲರೂ ಇಳಿಯುವಂತೆ ಸೂಚಿಸಿದ್ದಾನೆ. ಆದ್ದರಿಂದ ಎಲ್ಲ ಪ್ರಯಾಣಿಕರು ಲಘುಬಗೆಯಿಂದ ಕೆಳಕ್ಕಿಳಿದಿದ್ದರಿಂದ ದೊಡ್ಡ ಅನಾಹುತ ತಪ್ಪಿದೆ.

ಬಸ್ಸಿಗೆ ಬೆಂಕಿ ತಗುಲಿರುವ ವಿಷಯ ತಿಳಿಯುತ್ತಿದ್ದಂತೆ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಂದಿಸಿ ಹೆಚ್ಚಿನ ಅನಾಹುತ ಸಂಭವಿಸುವುದನ್ನು ತಪ್ಪಿಸಿದ್ದಾರೆ. ಟೈರ್‌ಗಳು ಜಾಮ್ ಆಗಿದ್ದರಿಂದ ಬಸ್ಸಿಗೆ ಬೆಂಕಿ ತಗುಲಿದೆ ಎಂದು ಸ್ಥಳೀಯ ವಾಯವ್ಯ ಸಾರಿಗೆ ಡಿಪೋ ಅಧಿಕಾರಿ ತಿಳಿಸಿದ್ದಾರೆ.

ಈ ಕುರಿತು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕುಡಿವ ನೀರು ಪೂರೈಕೆ ನಿರ್ಲಕ್ಷ್ಯ, ಗ್ರಾಮಸ್ಥರ ಪ್ರತಿಭಟನೆ

• **ಕನ್ನಡಪ್ರಭ ವಾರ್ತೆ** ರಟ್ಟೀಹಳ್ಳಿ

ತಾಲೂಕಿನ ಸಣ್ಣಗುಬ್ಬಿ ಗ್ರಾಮದ ಮಾದಿಗ ಕಾಲೋನಿಗೆ ಸರಿಯಾದ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸದೇ ತಾಲೂಕಾಡಳಿತ ನಿರ್ಲಕ್ಷ್ಯವಹಿಸಿದೆ. ನೀರಿನ ಸಮಸ್ಯೆಯ ಬಗ್ಗೆ ಅಧಿಕಾರಿಗಳ ಬಳಿ ಮನವಿ ಮಾಡಿದರೂ ಕೇವಲ ಹಾರಿಕೆ ಉತ್ತರ ನೀಡುತ್ತಿದ್ದಾರೆ ಎಂದು ಆರೋಪಿಸಿ ಅಲ್ಲಿನ ನಿವಾಸಿಗಳು ಮಂಗಳವಾರ ದಿಢೀರ್ ಪ್ರತಿಭಟನೆ ನಡೆಸಿದರು.

ಈ ವೇಳೆ ಗ್ರಾಮದ ಮುಖಂಡ ರಾಜು ಮುಕ್ಕಣ್ಣನವರ ಮಾತನಾಡಿ, ಕಳೆದ ಎರಡು ತಿಂಗಳಿಂದ ನಮ್ಮ ಕಾಲೋನಿಗೆ ಸರಿಯಾದ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸದೆ ಗ್ರಾಮ ಪಂಚಾಯತ್‌ನವರು ಮಲತಾಯಿ ಧೋರಣೆ ತೋರುತ್ತಿದ್ದಾರೆ. ಗ್ರಾಮದ ಇನ್ನುಳಿದ ಕಡೆ ಅಲ್ಪ ಮಟ್ಟಿಗೆ ಉತ್ತಮ ನೀರಿನ ವ್ಯವಸ್ಥೆ ಕಲ್ಪಿಸಿದ್ದು ನಮ್ಮ ಕಾಲೋನಿ ಸ್ವಲ್ಪ ಎತ್ತರ ಪ್ರದೇಶದಲ್ಲಿದ್ದು, ಅದನ್ನೇ ನೆಪ ಮಾಡಿಕೊಂಡು ಗ್ರಾಪಂ, ತಾಪಂ ನಿರ್ಲಕ್ಷ್ಯ ತೋರುತ್ತಿದೆ. ಸಂಬಂಧ ಪಟ್ಟ ಅಧಿಕಾರಿಗಳಲ್ಲಿ ಈ ಬಗ್ಗೆ ಅನೇಕ ಬಾರಿ ಮನವಿ ಮಾಡಿದರೂ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು.

ಕಳೆದ ಎರಡು, ಮೂರು ತಿಂಗಳಿನಿಂದ ನೀರಿನ ಸಮಸ್ಯೆ ತಾಲೂಕಾಡಳಿತಕ್ಕೆ ಮಾಹಿತಿ ಇದ್ದರೂ ಅಧಿಕಾರಿಗಳು ಮಾತ್ರ ಜಾಣ ಕುರುಡುತನ ಪ್ರದರ್ಶನ ಮಾಡುತ್ತಿದ್ದಾರೆ. ನಮ್ಮ ಕಾಲೋನಿಗೆ ಎರಡು ದಿನಕ್ಕೆ ಒಂದು ಬಾರಿ ನೀರು ಸರಬರಾಜು ಮಾಡುತ್ತಿದ್ದು ಅದು ಕೇವಲ 4ರಿಂದ 5 ಬಿಂದಿಗೆ ನೀರು ಸಿಗುತ್ತಿದೆ. ಅದನ್ನೇ ಕುಡಿಯಲು ಬಳಸಿದರೆ ಇನ್ನುಳಿದ ಬಳಕೆಗೆ ನೀರಿಲ್ಲದೆ ಪರದಾಡುವಂತಾಗಿದೆ.



ರಟ್ಟೀಹಳ್ಳಿ ತಾಲೂಕಿನ ಸಣ್ಣಗುಬ್ಬಿ ಗ್ರಾಮದ ಮಾದಿಗ ಕಾಲೋನಿಗೆ ಸರಿಯಾದ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಅಲ್ಲಿನ ನಿವಾಸಿಗಳು ದಿಡೀರ ಪ್ರತಿಭಟನೆ ನಡೆಸಿದರು.

ಹೆಚ್ಚುವರಿ ನೀರಿಗಾಗಿ 2.ಕಿ ಮೀ. ನಷ್ಟು ಕ್ರಮಿಸಿ ನೀರು ತರುವಂತ ಪರಿಸ್ಥಿತಿ ಉಲ್ಬಣವಾಗಿದೆ. ಗ್ರಾಮದಲ್ಲಿ ಕೂಲಿ ನಾಲಿ ಮಾಡಿಕೊಂಡು ಪ್ರತಿನಿತ್ಯ ಜೀವನ ಸಾಗಿಸುವ ಶ್ರಮಿಕ ವರ್ಗದವರಾಗಿದ್ದು ಜೀವನ ನಡೆಸುವುದೇ ದುಸ್ತರವಾಗಿದೆ. ಇಂಥ ಸಂದರ್ಭದಲ್ಲಿ ನೀರಿಗೆ ಪ್ರತಿದಿನ ಪರದಾಡುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮದ ನೀರಿನ ಸಮಸ್ಯೆಯ ಬಗ್ಗೆ ಕಡೂರ ಗ್ರಾಮ ಪಂಚಾಯಿತಿಗೆ ಮಾಹಿತಿ ನೀಡಿದರೂ ಇನ್ನು ಎರಡು ಮೂರು ದಿನಗಳಲ್ಲಿ ಸರಿಪಡಿಸುತ್ತೇವೆ ಎಂದು ಹೇಳಿ ಜಾರಿಕೊಳ್ಳುತ್ತಿದ್ದಾರೆ. ಆದ್ದರಿಂದ ತಾಲೂಕಾಡಳಿತ ತಕ್ಷಣ ಎಚ್ಚೆತ್ತು ಕನಿಷ್ಠ ನೀರಿನ ಸಮಸ್ಯೆಯನ್ನು ಬಗೆ ಹರಿಸದಿದ್ದರೆ ಸಂಬಂಧಪಟ್ಟ ಅಧಿಕಾರಿಗಳ ಮುಂದೆ ಕಾಲಿ ಕೊಡಗಳ ಪ್ರದರ್ಶನ ಮಾಡುವ ಮೂಲಕ ಉಗ್ರ ಪ್ರತಿಭಟನೆ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಮಂಜು ಮುಕ್ಕಣ್ಣನವರ, ಶೃತಿ ಮುಕ್ಕಣ್ಣನವರ, ರಾಘು ಹರಿಜನ, ಲತಾ ಹರಿಜನ, ಸುಮಲತಾ ಮುಕ್ಕಣ್ಣನವರ, ಹೊನ್ನಪ್ಪ ಹರಿಜನ, ಗಂಗಮ್ಮ ಹರಿಜನ, ಹನಮಂತಪ್ಪ ಹರಿಜನ, ಮಾತಂಗೆಮ್ಮ ಹರಿಜನ ಇದ್ದರು.

ಕಡೂರ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಒಳಪಡುವ ಸಣ್ಣಗುಬ್ಬಿ ಗ್ರಾಮದಲ್ಲಿ ನೀರಿನ ಸಮಸ್ಯೆಯ ಬಗ್ಗೆ ದೂರುಗಳು ಬಂದಿದ್ದು, ಬಿಸಿಲಿನ ತಾಪಮಾನದಿಂದಾಗಿ ಬೋರವೆಲ್‌ಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದಿದ್ದು, ಇನ್ನು ಎರಡು, ಮೂರು ದಿನಗಳಲ್ಲಿ ಸಮಸ್ಯೆಯನ್ನು ಬಗೆ ಹರಿಸಲಾಗುವುದು ಎಂದು ಕಡೂರು ಗ್ರಾಪಂ ಅಭಿವೃದ್ಧಿ ಅಧಿಕಾರಿ ಪಿ.ಎಸ್. ಆರಾಧ್ಯಮಠ ಹೇಳಿದರು.

ಗ್ರಾಮೀಣ ರಸ್ತೆ ಸಿಸಿ ರಸ್ತೆಯನ್ನಾಗಿಸಿ ಸುಗಮ ಸಂಚಾರಕ್ಕೆ ಅವಕಾಶ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ತಾಲೂಕಿನಲ್ಲಿ ಇದೇ ಮೊದಲ ಬಾರಿಗೆ ಬಹಳ ದೊಡ್ಡ ಪ್ರಮಾಣದಲ್ಲಿ ಗ್ರಾಮಗಳ ಒಳಗಿನ ರಸ್ತೆಗಳನ್ನು ಸಿಸಿ ರಸ್ತೆಗಳನ್ನಾಗಿ ಸುಧಾರಿಸಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಶೀಘ್ರದಲ್ಲಿ ಮತ್ತಷ್ಟು ಸಿಸಿ ರಸ್ತೆ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳುವುದಾಗಿ ಶಾಸಕ ಶ್ರೀನಿವಾಸ ಮಾನೆ ತಿಳಿಸಿದರು.

ತಾಲೂಕಿನ ಸಾಂವಸಗಿ ಗ್ರಾಪಂ ವ್ಯಾಪ್ತಿಯ ಶಿರಮಾಪುರ ಗ್ರಾಮದಲ್ಲಿ 2025-26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ 12 ಲಕ್ಷ ರು. ವೆಚ್ಚದಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದ ಅವರು ಪಂಚ ಗ್ಯಾರಂಟಿ ಯೋಜನೆಗಳ ಜೊತೆಗೆ ತಾಲೂಕಿನಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ ಎಂದು ತಿಳಿಸಿದರು.

ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕಾಧ್ಯಕ್ಷ ವಿಜಯಕುಮಾರ ದೊಡ್ಡಮನಿ, ಕೆಪಿಸಿಸಿ ಸದಸ್ಯ ಟಾಕನಗೌಡ ಪಾಟೀಲ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಹನುಮಂತಪ್ಪ ಮರಗಡಿ, ಮಂಜು ಗೊರಣ್ಣನವರ, ಮುಖಂಡರಾದ ಟಾಕಪ್ಪ ದೊಡ್ಡಮನಿ, ಶಿವಪ್ಪ ದೊಡ್ಡಮನಿ, ಆದರ್ಶ ಶೆಟ್ಟಿ, ಬಸನಗೌಡ ಪಾಟೀಲ, ಶಿವಪ್ಪ ತಳವಾರ, ಜಗದೀಶ ದ್ಯಾಮನಕೊಪ್ಪ, ಶಿವರಾಜ ದೊಡ್ಡಮನಿ, ಜಗದೀಶ ದೊಡ್ಡಮನಿ, ರಾಜೂ ಚಂದ್ರಗಿರಿ, ನಿಂಗಪ್ಪ ಕಟ್ಟಿ, ಚಂದ್ರು ದೊಡ್ಡಮನಿ, ಶಾಂತಪ್ಪ ದೊಡ್ಡಮನಿ, ಗುತ್ತೆಪ್ಪ ತಳವಾರ, ದೇವರಾಜ ತಳವಾರ ಮತ್ತಿತರರು ಇದ್ದರು.

ಉಪಚುನಾವಣೆ ಗೆಲುವು: ಜನರ ವಿಶ್ವಾಸ ಮತ್ತೆ ಸಾಬೀತು

• **ಕನ್ನಡಪ್ರಭ ವಾರ್ತೆ** ಬ್ಯಾಡಗಿ

- ಶಾಸಕ ಬಸವರಾಜ ಶಿವಣ್ಣನವರ ಹೇಳಿಕೆ
- ಗ್ಯಾರಂಟಿ ಯೋಜನೆಗಳು, ಅಭಿವೃದ್ಧಿ ಕಾರ್ಯಗಳಿಂದ ಗೆಲುವು

ದಾವಣಗೆರೆ ಹಾಗೂ ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವು ಪಕ್ಷದ ಮೇಲಿರುವ ತಮ್ಮ ವಿಶ್ವಾಸವನ್ನು ಜನರು ಮತ್ತೆ ಸಾಬೀತುಪಡಿಸಿದ್ದಾರೆ ಎಂದು



ಶಾಸಕ ಬಸವರಾಜ ಶಿವಣ್ಣನವರ ಹೇಳಿದರು.

ಪಟ್ಟಣದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಎರಡು ಕ್ಷೇತ್ರಗಳ ಫಲಿತಾಂಶ ಕಾಂಗ್ರೆಸ್ ಸರ್ಕಾರದ ಜನಪರ ಆಡಳಿತಕ್ಕೆ ದೊರೆತ ಸ್ಪಷ್ಟ ಜನಾದೇಶವಾಗಿದೆ, ಕಾಂಗ್ರೆಸ್ ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಮತ್ತು ಅಭಿವೃದ್ಧಿ ಕಾರ್ಯಕ್ರಮಗಳು ಜನರ ಮನಸ್ಸು ಗೆದ್ದಿರುವುದರಿಂದಲೇ ಉಪಚುನಾವಣೆಯಲ್ಲಿ ಗೆಲುವು ಸಾಧ್ಯವಾಗಿದೆ ಎಂದರು.

ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರಕಾರಕ್ಕೆ ಈ ಉಪಚುನಾವಣೆಗಳು ಅತ್ಯಂತ ಮಹತ್ವದ್ದಾಗಿದ್ದವು. ವಿರೋಧ ಪಕ್ಷಗಳು ಎಷ್ಟೇ ರಾಜಕೀಯ ತಂತ್ರಗಳನ್ನು ಅನುಸರಿಸಿದರೂ ಸಹ ಜನರು ಸತ್ಯಕ್ಕೆ ಬೆಂಬಲ ನೀಡಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಆಶೀರ್ವಾದ ನೀಡಿದ್ದಾರೆ ಎಂದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿಯೇ ಜನತೆ ಕಾಂಗ್ರೆಸ್ ಪಕ್ಷಕ್ಕೆ ಸ್ಪಷ್ಟ ಬಹುಮತ ನೀಡಿದ್ದು, ಇದೀಗ ಉಪ ಚುನಾವಣೆಯಲ್ಲೂ ಅದೇ ನಂಬಿಕೆಯನ್ನು ತೋರಿಸಿದ್ದಾರೆ, ಇದು ಸರ್ಕಾರದ ಕಾರ್ಯಕ್ಷಮತೆ ಹಾಗೂ ಜನಪರ ನೀತಿಗಳೇ ಚುನಾವಣೆ ಯಶಸ್ಸಿಗೆ ಸಾಕ್ಷಿ ಎಂದರು.

ಕಾಂಗ್ರೆಸ್ ಸರಕಾರ ಜನರ ಆಶೋತ್ತರಗಳಿಗೆ ತಕ್ಕಂತೆ ಕೆಲಸ ಮಾಡುತ್ತಿದೆ, ಬಡವರು, ರೈತರು, ಮಹಿಳೆಯರು ಹಾಗೂ ಯುವಕರಿಗಾಗಿ ಜಾರಿಗೆ ತಂದಿರುವ ಯೋಜನೆಗಳು ಜನಜೀವನದಲ್ಲಿ ಸಾಕಷ್ಟು ಬದಲಾವಣೆ ತಂದಿವೆ, ಮುಂದಿನ ದಿನಗಳಲ್ಲೂ ಇದೇ ವೇಗದಲ್ಲಿ ರಾಜ್ಯದಲ್ಲಿ ಸರ್ಕಾರದಿಂದ ಅಭಿವೃದ್ಧಿ ಕಾರ್ಯಗಳನ್ನು ನಡೆಸಲಿದೆ. ಎರಡೂ ಕ್ಷೇತ್ರಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಮೂಲಸೌಕರ್ಯ, ಉದ್ಯೋಗಾವಕಾಶಗಳು ಹಾಗೂ ಸಾರ್ವಜನಿಕ ಸೇವೆಗೆ ಹೆಚ್ಚಿನ ಒತ್ತು ನೀಡಲಾಗುವುದು. ''ಜನರ ವಿಶ್ವಾಸವೇ ನಮ್ಮ ಶಕ್ತಿ, ಅಭಿವೃದ್ಧಿಯೇ ನಮ್ಮ ಗುರಿ'' ಎಂದರು.

ದಲ್ಜಿತ್ ಕುಮಾರ್ ಜಿಪಂ ಹೊಸ ಸಿಇಒ

ಹಾವೇರಿ: ಇಲ್ಲಿನ ಜಿಲ್ಲಾ ಪಂಚಾಯಿತಿ



ಸಿಇಒ ಆಗಿ 2021ರ ಬ್ಯಾಚ್‌ನ ಕರ್ನಾಟಕ ಕೇಡರ್‌ನ ಐಎಎಸ್ ಅಧಿಕಾರಿ ದಲ್ಜಿತ್ ಕುಮಾರ್ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಗ್ರೇಟರ್‌ಬೆಂಗಳೂರಿನ ಸೆಂಟ್ರಲ್ ವಿಭಾಗದ ಹೆಚ್ಚುವರಿ ಆಯುಕ್ತರಾಗಿ ದಲ್ಜಿತ್ ಕುಮಾರ್‌ಕಾರ್ಯ ನಿರ್ವಹಿಸುತ್ತಿದ್ದರು. ಇವರು ರೂರ್ಕಿಯ ಐಐಟಿಯಲ್ಲಿ ಪೇಪರ್ ಟೆಕ್ನಾಲಜಿ ಕುರಿತ ಬಿ.ಟೆಕ್ ಪದವೀಧರರಾಗಿದ್ದಾರೆ.



ಸಾಂಘಿಕ ಪ್ರಯತ್ನದಿಂದ ಕನ್ನಡ ಪರಂಪರೆ ಬೆಳೆಸುವ ಕಾರ್ಯ-ಸಂಜೀವಕುಮಾರ

ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ, ಸಾಧಕರಿಗೆ ಸನ್ಮಾನ

• **ಕನ್ನಡಪ್ರಭ ವಾರ್ತೆ** ಹಾವೇರಿ

ಸಾಂಘಿಕ ಪ್ರಯತ್ನ ಮತ್ತು ಸತತ ಪರಿಶ್ರಮದ ಫಲವಾಗಿ ಕನ್ನಡ ಪರಂಪರೆಯನ್ನು ಬೆಳೆಸುವ ಕಾರ್ಯ ಮಾಡುತ್ತಿರುವ ಜಿಲ್ಲೆಯ ಕನ್ನಡದ ಮನಸ್ಸುಗಳು ಮಾದರಿ ರೂಪದಲ್ಲಿ ಬೆಳೆದಿರುವುದು ಅಭಿಮಾನ ಮೂಡಿಸಿದೆ ಎಂದು ಹುತಾತ್ಮ ಮೈಲಾರ ಮಹಾದೇವಪ್ಪನವರ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ನಿಯೋಜಿತ ಅಧ್ಯಕ್ಷ ಸಂಜೀವಕುಮಾರ ನೀರಲಗಿ ಹೇಳಿದರು.

ಇಲ್ಲಿನ ವಿನಾಯಕ ನಗರದ ಶ್ರೀ ಗಂಗಾಧರ ನಂದಿ ಕನ್ನಡ ಸಾಹಿತ್ಯ ಭವನದಲ್ಲಿ ಜರುಗಿದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಜಿಲ್ಲೆಯಲ್ಲಿ ಜರುಗಿದ 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅಚ್ಚುಕಟ್ಟಾಗಿ ಆಯೋಜಿಸುವ ಮೂಲಕ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದ ಪುಟಗಳಲ್ಲಿ ಸದಾ ಉಳಿಯುವ ಕಾರ್ಯ ಮಾಡಿದೆ. ಯಾವುದೇ ಒಂದು ಸಂಸ್ಥೆ ಕ್ರಿಯಾಶೀಲವಾಗಿ ಕೆಲಸ ಮಾಡಲು ಸಕ್ರಿಯ ರೂಪದ ತಂಡ ಇರಬೇಕು. ಆಗ ಮಾತ್ರ ಗುರಿ ಮತ್ತು ಉದ್ದೇಶ ತಲುಪಲು ಸಾಧ್ಯ ಎಂದರು.

ಕಸಾಪದ ಪ್ರತಿಯೊಬ್ಬರೂ ತನು-ಮನ-ಧನದಿಂದ ಸಾಹಿತ್ಯಿಕ ವಾತಾವರಣ ಸೃಷ್ಟಿಸಿರುವರು. ಸರ್ಕಾರ ಮತ್ತು ದಾನಿಗಳ ಸಹಕಾರದಿಂದ ಸ್ವಾಯತ್ತ ಸಂಸ್ಥೆಗೆ ಸ್ವಂತ ಕಟ್ಟಡ ನಿರ್ಮಿಸಿರುವುದು ಮುಂಬರುವ ದಿನಗಳಲ್ಲಿ ಜಿಲ್ಲೆಯ ಸಾಹಿತ್ಯ ಲೋಕ ಸದಾ ಜೀವಂತಿಕೆ ರೂಪ ಪಡೆಯುತ್ತದೆ ಎಂದರು.

ಉಪನ್ಯಾಸ ನೀಡಿದ ಸಾಹಿತಿ ಡಾ.ಎಚ್.ಐ. ತಿಮ್ಮಾಪುರ ಮಾತನಾಡಿ, ಕನ್ನಡ ನಾಡು-ನುಡಿ ಪೋಷಿಸಲು ಮೈಸೂರು ಅಭ್ಯುದಯ ಸಮಾಜ ಹೆಸರಿನಲ್ಲಿ ಶುರುವಾದ ಕನ್ನಡ ಸಾಹಿತ್ಯ ಪರಿಷತ್ತು ಸದ್ಯ ನಾಲ್ಕು ಲಕ್ಷಕ್ಕೂ ಅಧಿಕ ಆಜೀವ ಸದಸ್ಯರನ್ನು ಪಡೆದ ಹೆಗ್ಗಳಿಕೆ ಹೊಂದಿದೆ. ರಾಜ್ಯದ ಎಲ್ಲ ಗಡಿ ಪ್ರದೇಶದ ಭಾಷೆಗಳನ್ನು ಒಂದೇ ರೂಪಕ್ಕೆ ತರುವುದು, ಪಠ್ಯಪುಸ್ತಕ ರಚಿಸುವುದು, ಕನ್ನಡದ ಅಕ್ಷರ ಜಾತ್ರೆ ಆಯೋಜಿಸುವ ಮೂಲಕ ನೂರು ವರ್ಷಗಳನ್ನು ದಾಟಿ ಬಂದಿರುವುದು ಒಂದು ಮೈಲಿಗಲ್ಲು ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕೋಶಾಧ್ಯಕ್ಷ ಎಸ್.ಎನ್. ದೊಡ್ಡಗೌಡ್ರ ಮಾತನಾಡಿದರು. ಡಿಡಿಪಿಯು ಅಶೋಕ ಶಾಸ್ತ್ರಿ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಸಂದರ್ಭದಲ್ಲಿ ಪ್ರತಿಭಾವಂತವಿದ್ಯಾರ್ಥಿಗಳನ್ನುಆಹ್ವಾನಿಸಿಗೌರವಿಸಿರುವುದು ಅಭಿನಂದನೀಯ. ವಿದ್ಯಾರ್ಥಿಗಳು ತಮ್ಮ ಸತತ ಶ್ರಮದಿಂದ ಉತ್ತಮ ಅಂಕಗಳನ್ನು ಗಳಿಸಿ ನಮ್ಮ ಇಲಾಖೆಗೂ ಹಾಗೂ ಹೆತ್ತವರಿಗೂ ಹೆಸರು ತಂದಿರುವರು ಎಂದರು.

ಇದೇ ಸಂದರ್ಭದಲ್ಲಿ ಸಂಜೀವಕುಮಾರ ನೀರಲಗಿ, ಲಿಂಗರಾಜ ಸೊಟ್ಟಪ್ಪನವರ, ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳಾದ ಲಕ್ಷ್ಮಿ ವಾಲ್ಮೀಕಿ, ಆರತಿ ಆನ್ವೇರಿ, ಶಂಭುಲಿಂಗ ಸುಂಕದ, ಪ್ರಸನ್ನಕುಮಾರ ಪಾಟೀಲ ಅವರನ್ನು ಸನ್ಮಾನಿಸಲಾಯಿತು. ಹಿರಿಯ ಸಾಹಿತಿ ಡಾ. ಸತೀಶ ಕುಲಕರ್ಣಿ, ಕಸಾಪ ತಾಲೂಕಾಧ್ಯಕ್ಷ ವೈ.ಬಿ. ಆಲದಕಟ್ಟಿ, ಪರಿಷತ್ತಿನ ಶಂಕರ ಸುತಾರ, ಪೃಥ್ವಿರಾಜ್ ಬೆಟಗೇರಿ, ವಿ.ಪಿ. ದ್ಯಾಮಣ್ಣವರ, ಹನುಮಂತಗೌಡ ಗೊಲ್ಲರ, ಈರಣ್ಣ ಬೆಳವಡಿ, ರೇಣುಕಾ ಗುಡಿಮನಿ, ಜುಬೇದಾ ನಾಯಕ್, ಅಕ್ಕಮಹಾದೇವಿ ಹಾನಗಲ್ಲ ಉಪಸ್ಥಿತರಿದ್ದರು.

ಎನ್.ಬಿ.ಕಾಳೆ ನಿರೂಪಿಸಿದರು. ಸಿ.ಎಸ್. ಮರಳಿಹಳ್ಳಿ ಸ್ವಾಗತಿಸಿದರು. ಸಿದ್ದೇಶ್ವರ ಹುಣಸಿಕಟ್ಟಿಮಠ ವಂದಿಸಿದರು.



ಹಾವೇರಿಯ ಶ್ರೀ ಗಂಗಾಧರ ನಂದಿ ಕನ್ನಡ ಸಾಹಿತ್ಯ ಭವನದಲ್ಲಿ ಜರುಗಿದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಸಮಾರಂಭದಲ್ಲಿ ಪಿಯುಸಿ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಬಹುಶಃ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷನಾಗಿ ಇದು ನನ್ನ ಕೊನೆಯ ಕಾರ್ಯಕ್ರಮ. ಎರಡು ಅವಧಿಯಲ್ಲಿ ನನಗೆ ಅವಕಾಶ ನೀಡಿ ಕನ್ನಡ ನುಡಿ ಸೇವೆ ಮಾಡಲು ಸಹಕಾರ ನೀಡಿದವರನ್ನು ಮತ್ತು ನನಗೆ ನೈತಿಕವಾಗಿ ಬೆಂಬಲಿಸಿದವರನ್ನು ಸದಾ ಸ್ಮರಿಸುವೆ. ಇದು ನನ್ನ ಪಾಲಿಗೆ ಸಂದ ಅದೃಷ್ಟವೂ ಎಂದು ಭಾವಿಸುತ್ತೇನೆ.

• **ಲಿಂಗಯ್ಯ ಬಿ.ಹಿರೇಮಠ**
ಅಧ್ಯಕ್ಷರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು

ಇಂದು ಕುರುಬ ಸಮಾಜದ ಸಭೆ

ಹಾವೇರಿ: ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾ ಘಟಕದಿಂದ ಮೇ 6ರಂದು 11 ಗಂಟೆಗೆ ನಗರದ ಪ್ರವಾಸಿ ಮಂದಿರದಲ್ಲಿ ಕುರುಬ ಸಮಾಜದ ಸಭೆಯನ್ನು ಕರೆಯಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಶಾಸಕ ಬಸವರಾಜ ಶಿವಣ್ಣನವರ ವಹಿಸಲಿದ್ದಾರೆ. ಸಭೆಯಲ್ಲಿ ನಗರದ ಕನಕ ವೃತ್ತದ ಸಮಗ್ರ ಅಭಿವೃದ್ಧಿ ಹಾಗೂ ಕನಕ ಮೂರ್ತಿ ಪ್ರತಿಷ್ಠಾಪನೆ ಕುರಿತು ಚರ್ಚೆ ನಡೆಸಲಿದೆ. ಸಭೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎಸ್.ಎಸ್ ಎನ್ ಗಾಜೀಗೌಡ್ರ, ಕುರುಬ ಸಮಾಜದ ಜಿಲ್ಲಾಧ್ಯಕ್ಷ ನಾಗರಾಜ ಆನ್ವೇರಿ, ಜಿಲ್ಲಾ ಉಪಾಧ್ಯಕ್ಷ ಅಶೋಕ ಬಣಕಾರ ಸೇರಿದಂತೆ ಜಿಲ್ಲೆಯ ಕುರುಬ ಸಂಘದ ಅಧ್ಯಕ್ಷರು, ತಾಲೂಕಿನ ಅಧ್ಯಕ್ಷರು ಪದಾಧಿಕಾರಿಗಳು ಸಮಾಜ ಎಲ್ಲ ಬಂಧುಗಳು ಸಭೆಗೆ ಆಗಮಿಸಬೇಕೆಂದು ಕುರುಬ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹನುಮಂತಗೌಡ ಗಾಜೀಗೌಡ್ರ ತಿಳಿಸಿದ್ದಾರೆ.

ಇಂದು ವಿದ್ಯುತ್ ನಿಲುಗಡೆ



ರಾಣೆಬೆನ್ನೂರು: ಪರಿವರ್ತಕಗಳಿಗೆ ಮಾಪಕ ಬದಲಿಸುವ ಕಾಮಗಾರಿ ಪ್ರಯುಕ್ತ ಮೇ 6ರಂದು ಬೆಳಗ್ಗೆ 10ರಿಂದ ಸಂಜೆ 6ರ ವರೆಗೆ ನಗರದ ಅಡವಿ ಆಂಜನೇಯ ಬಡಾವಣೆ, ಕೊಟ್ಟೂರೇಶ್ವರ ನಗರ, ಗಂಗಾಪುರ ರಸ್ತೆ, ರೇಲ್ವೆ ಗೇಟಿನ ನಂತರದ ದೇವರಗುಡ್ಡ ರಸ್ತೆ, ಹುಲ್ಲತ್ತಿ ರಸ್ತೆಯ ಪ್ರದೇಶಗಳಿಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಆದ್ದರಿಂದ ಗ್ರಾಹಕರು ಸಹಕರಿಸಬೇಕು ಎಂದು ಹೆಸ್ಕಾಂ ಕಚೇರಿ ಪ್ರಕಟಣೆ ತಿಳಿಸಿದೆ.

ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ರಾಣೆಬೆನ್ನೂರು: ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಭಾರತ ರತ್ನ ಡಾ. ಬಿ. ಆರ್. ಅಂಬೇಡ್ಕರ್‌ವಸತಿ ಶಾಲೆ ನೂಕಾಪುರ ಹಾಗೂ ರಾಣೆಬೆನ್ನೂರು ನಗರ ಇಲ್ಲಿ 1ರಿಂದ 5ನೇ ತರಗತಿಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ಹಾಗೂ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ಮಾಕನೂರನಲ್ಲಿ 1ರಿಂದ 7ನೇ ತರಗತಿಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ 2026-27ನೇ ಸಾಲಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆಯಾ ವಸತಿ ಶಾಲೆಗಳಲ್ಲಿ ಹಾಗೂ ಸಹಾಯಕ ನಿರ್ದೇಶಕರ ಕಾರ್ಯಾಲಯ ರಾಣೆಬೆನ್ನೂರ ಇವರ ಬಳಿ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಮೇ 25ರ ಸಂಜೆ 5.30ರ ಒಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ರಾಣೆಬೆನ್ನೂರು ನಗರದ ಸಹಾಯಕ ನಿರ್ದೇಶಕರ ಕಾರ್ಯಾಲಯದಲ್ಲಿ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಕಾವ್ಯಶ್ರೀ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.